ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಬೀದರ್ ಜಿಲ್ಲೆಯ ಬಿ. ಎಸ್. ಎಸ್. ಕೆ (ಹಳ್ಳಿಖೇಡ ಬಿ) ಕಾರ್ಖಾನೆಯ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ(ವಿಧಾನಸಭೆಯಿಂದ ಚುನಾಯಿತರಾದವರು) -

02 (47) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರೈತರ ಜೀವನಾಡಿಯಾಗಿರುವ ಬಿ. ಎಸ್. ಎಸ್. ಕೆ. ಸಕ್ಕರೆ ಕಾರ್ಖಾನೆಯನ್ನು ಕಳೆದ ಎರಡು ಹಂಗಾಮಿನಿಂದ ಪ್ರಾರಂಭ ಮಾಡದೆ ಬಂದ್ ಮಾಡಲಾಗಿದ್ದು, ಅಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರಿಗೆ ಎರಡು ವರ್ಷದಿಂದ ಸಂಬಳ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅವರಿಗೆ ಪರಿಹಾರ ನೀಡುವ ಯೋಚನೆ ಸರ್ಕಾರಕ್ಕೆ ಇದೆಯೇ; ಇದ್ದಲ್ಲಿ, ಯಾವಾಗ ಪರಿಹಾರ ನೀಡಲಾಗುವುದು;

(ಆ) ಈ ಕಾರ್ಖಾನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರಿಗೆ ಪರ್ಯಾಯ ಪರಿಹಾರ ನೀಡುವ ಯೋಜನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಹಮ್ಮಿಕೊಂಡಿರುವ ಯೋಜನೆಗಳಾವುವು;

(ಇ) ಸದರಿ ಕಾರ್ಖಾನೆಯನ್ನು ಪುನಶ್ಚೇತನ ಮಾಡುವ ಯೋಜನೆ ಸರ್ಕಾರಕ್ಕಿದೆಯೇ; ಇದ್ದರೆ ಯಾವಾಗ ಪ್ರಾರಂಭಿಸಲಾಗುವುದು; ಇಲ್ಲದಿದ್ದರೆ ಅದಕ್ಕೆ ಕಾರಣವೇನು;

(ಈ) ಈ ಜಿಲ್ಲೆಯಲ್ಲಿ ಅನೇಕ ಕಾರ್ಮಿಕರಿದ್ದು ಅವರಿಗಾಗಿ ಒಂದು ಆಸ್ಪತ್ರೆ ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ; ಇದ್ದರೆ ಆರಂಭಿಸಲಾಗುವುದು ಯಾವಾಗ; ಇಲ್ಲದಿದ್ದಲ್ಲಿ, ಅದಕ್ಕೆ ಕಾರಣವೇನು? (ವಿವರ ನೀಡುವುದು)